# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

42

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ      ದಿನಾಂಕ : DATE 6/3/21

## ಆರು ಸಚಿವರಿಂದ ಕೋರ್ಟ್ ಮೊರೆ

ಬೆಂಗಳೂರು: ತಮ್ಮ ವಿರುದ್ಧ ಯಾವುದೇ ಆಕ್ಷೇಪಾರ್ಹ ಸುದ್ದಿಗಳನ್ನು ಪ್ರಸಾರ ಮಾಡದಂತೆ ಮಾಧ್ಯಮಗಳಿಗೆ ನಿರ್ಬಂಧ ಹೇರಬೇಕು ಎಂದು ಕೋರಿ ಸರ್ಕಾರದ ಆರು ಮಂದಿ ಸಚಿವರು ಕೋರ್ಟ್‌ಗೆ ಮೊರೆ ಹೋಗಿದ್ದಾರೆ. ಸಚಿವರಾದ ಡಾ. ಕೆ. ಸುಧಾಕರ್, ಭೈರತಿ ಬಸವರಾಜು, ಬಿ.ಸಿ. ಪಾಟೀಲ್, ಎಸ್.ಟಿ. ಸೋಮಶೇಖರ್, ಕೆ.ಸಿ. ನಾರಾಯಣಗೌಡ, ಶಿವರಾಮ ಹೆಬ್ಬಾರ್ ನಗರದ 27ನೇ ಸಿಸಿಎಚ್ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದು, ಮಾ.6 (ಶನಿವಾರ) ಅರ್ಜಿ ವಿಚಾರಣೆಗೆ ನಿಗದಿಯಾಗಿದೆ. ಜಲಸಂಪನ್ಮೂಲ ಸಚಿವರಾಗಿದ್ದ ರಮೇಶ್ ಜಾರಕಿಹೊಳಿ ಅವರ ಸಿಡಿ ಬಹಿರಂಗಗೊಂಡ ಬೆನ್ನಲ್ಲೇ ಆರು ಮಂದಿ ಸಚಿವರು ಕೋರ್ಟ್‌ಗೆ ಅರ್ಜಿ ಸಲ್ಲಿಸಿರುವುದು ಕುತೂಹಲ ಮೂಡಿಸಿದೆ. ತಮ್ಮ ವಿರುದ್ಧ ಯಾವುದೇ ಆಕ್ಷೇಪಾರ್ಹ ಸುದ್ದಿಗಳನ್ನು ಪ್ರಸಾರ ಮಾಡದಂತೆ ಮಾಧ್ಯಮಗಳಿಗೆ ನಿರ್ಬಂಧ (ಇನ್‌ಜಂಕ್ಷನ್) ಕೋರಿ ಅರ್ಜಿಯಲ್ಲಿ ಸಚಿವರು ಮನವಿ ಮಾಡಿದ್ದಾರೆ ಎನ್ನಲಾಗಿದೆ.